ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 68 ಎಲ್ ಡಬ್ಲ್ಯೂಎ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 30.11.2022

## ಅಧಿಸೂಚನೆ

ಕರ್ನಾಟಕ ರಾಜ್ಯದಾದ್ಯಂತ, "ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹಕೆಲಸಗಳ ಉದ್ಯೋಗ" ಅನುಸೂಚಿತ ಉದ್ದಿಮೆಯಲ್ಲಿ ಯಾವುದೇ ಕೆಲಸದಲ್ಲಿ ತೊಡಗಿರುವ ಕಾರ್ಮಿಕರಿಗೆ ಈ ಕೆಳಕಂಡ ಕನಿಷ್ಠ ವೇತನ ಕೋಷ್ಟಕದಲ್ಲಿ ನಿರ್ದಿಷ್ಟಪಡಿಸಿರುವಂತೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಲು ರಾಜ್ಯ ಸರ್ಕಾರದ ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಪತ್ರದ ಭಾಗ -4ಎ ರಲ್ಲಿ ದಿನಾಂಕ: 16.06.2022 ರಂದು ಪ್ರಕಟಿಸಿ, ಕನಿಷ್ಠ ವೇತನ ಕಾಯ್ದೆ 1948 (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3 (1) (ಬಿ) ಮತ್ತು 5 (1) (ಬಿ) ಖಂಡದ ಮೇರೆಗೆ ಬಾಧಿತರಾಗುವ ಸಂಬಂಧವಿರುವ ವ್ಯಕ್ತಿಗಳ ಗಮನಕ್ಕೆ ತರಲಾಗಿದ್ದು, ಅವರಿಂದ ಸಲಹೆ/ ಆಕ್ಷೇಪಣೆಗಳನ್ನು ಸ್ವೀಕರಿಸಲು ಎರಡು ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಸ್ವೀಕೃತಗೊಂಡ ಸಲಹೆ/ ಆಕ್ಷೇಪಣೆಗಳು ಮತ್ತು ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಮುಂದೆ ಮಂಡಿಸಲಾಗಿತ್ತು.

ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಸಭೆಯಲ್ಲಿ, ಸದರಿ ಅಧಿಸೂಚನೆಗೆ ಸಂಬಂಧಪಟ್ಟಂತೆ ಸ್ವೀಕೃತವಾಗಿದ್ದ ಸಲಹೆ/ ಆಕ್ಷೇಪಣೆಗಳ ಕುರಿತು ಚರ್ಚಿಸಲಾಗಿರುತ್ತದೆ. ಅದರನ್ವಯ, ಸಭೆಯ ನಡವಳಿಯಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ರಾಜ್ಯ ಸರ್ಕಾರವು ಕನಿಷ್ಠ ವೇತನ ಕಾಯ್ದೆ 1948ರ (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3(1)(ಬಿ) ಮತ್ತು 5(1)(ಬಿ) ಖಂಡದ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮತ್ತು ಈ ಹಿಂದಿನ ಎಲ್ಲಾ ಅಧಿಸೂಚನೆಗಳನ್ನು ರದ್ದುಪಡಿಸಿ, ಕರ್ನಾಟಕ ರಾಜ್ಯಾದ್ಯಂತ "ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹಕೆಲಸಗಳ ಉದ್ಯೋಗ" ಉದ್ದಿಮೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ಕನಿಷ್ಠ ವೇತನವನ್ನು ಈ ಕೆಳಕಂಡ ಕೋಷ್ಟಕದಲ್ಲಿರುವಂತೆ ಪರಿಷ್ಕರಿಸಲಾಗಿದೆ.

### "ಕನಿಷ್ಠ ವೇತನ ಕೋಷ್ಟಕ"

| | ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ | | | | | | | | |
|---|---|---|---|---|---|---|---|---|---|
| ಕ್ರ ಸಂ | ಕೆಲಸದ ವರ್ಗಗಳು | ಕನಿಷ್ಠ ವೇತನ ದರಗಳು | | | | | | | |
| | | ವಲಯ-1 | | ವಲಯ-2 | | ವಲಯ-3 | | ವಲಯ-4 | |
| | | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| 1 | ತರಕಾರಿ/ ಮಾಂಸಾಹಾರಿ ಪದಾರ್ಥಗಳನ್ನು ಸ್ವಚ್ಛಗೊಳಿಸುವುದು ಮತ್ತು ಕತ್ತರಿಸುವುದು, ಬೇಳೆಕಾಳುಗಳನ್ನು ಶುಚಿಗೊಳಿಸುವುದು, ಗ್ರೈಂಡಿಂಗ್ ಮಾಡುವುದು, ಅಡಿಗೆ ಮಾಡುವುದು ಮತ್ತು ಅಡಿಗೆಮನೆ ಸ್ವಚ್ಛಗೊಳಿಸುವುದು | 665.15 | 17293.95 | 604.68 | 15721.77 | 549.71 | 14292.52 | 494.74 | 12863.27 |

| | | | | | | | | | |
|---|---|---|---|---|---|---|---|---|---|
| 2 | ಬಟ್ಟೆಗಳನ್ನು ಒಗೆಯುವುದು, ಪಾತ್ರೆಗಳನ್ನು ತೊಳೆಯುವುದು, ಮನೆ ನೋಡಿಕೊಳ್ಳುವುದು, ಜೊತೆಗೆ ಮಕ್ಕಳನ್ನು ನೋಡಿಕೊಳ್ಳುವುದು. | 591.95 | 15390.62 | 538.13 | 13991.47 | 489.21 | 12719.52 | 440.29 | 11447.57 |
| 3 | ಬಟ್ಟೆಗಳನ್ನು ಒಗೆಯುವುದು, ಪಾತ್ರೆಗಳನ್ನು ತೊಳೆಯುವುದು, ಮನೆ ನೋಡಿಕೊಳ್ಳುವುದು, ಮನೆ ತೊಳೆಯುವುದು ಮತ್ತು ಇತರೆ ಕೆಲಸ. | 578.64 | 15044.56 | 526.03 | 13676.87 | 478.21 | 12433.52 | 430.39 | 11190.17 |

ಮೇಲ್ಕಂಡ ಕನಿಷ್ಠ ವೇತನ ದರಗಳನ್ನು ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನಿಗದಿಪಡಿಸಿದ್ದು, ಈ ಎಲ್ಲಾ ಷರತ್ತುಗಳನ್ನು ಯಥಾವತ್ತಾಗಿ ಉದ್ಯೋಗದಾತರು ಪಾಲಿಸಲು ಬಾಧ್ಯಸ್ಥರಿರುತ್ತಾರೆ;

1. ವ್ಯತ್ಯಾಸವಾಗುವ ತುಟ್ಟಿಭತ್ಯೆ:-

ತುಟ್ಟಿಭತ್ಯೆ ಲೆಕ್ಕಾಚಾರವನ್ನು ವರ್ಷಕ್ಕೊಮ್ಮೆ ಮಾಡಲಾಗುತ್ತದೆ. ಹಿಂದಿನ ಕ್ಯಾಲೆಂಡರ್ ವರ್ಷದ ಹನ್ನೆರಡು (12) ತಿಂಗಳುಗಳ ಗ್ರಾಹಕ ಬೆಲೆ ಸೂಚ್ಯಾಂಕಗಳ ಸರಾಸರಿ ಆಧಾರದ ಮೇಲೆ ಏಪ್ರಿಲ್ ಮೊದಲನೇ ದಿನಾಂಕದಂದು ಪ್ರತಿ ವರ್ಷ ಲೆಕ್ಕಾಚಾರ ಮಾಡತಕ್ಕದ್ದು. ಅಲ್ಲದೇ ಗ್ರಾಹಕ ಬೆಲೆ ಸೂಚ್ಯಂಕಗಳ ಸಂಖ್ಯೆಯ ವಾರ್ಷಿಕ ಸರಾಸರಿ ಆಧಾರದ ಮೇಲೆ ಹೆಚ್ಚುವರಿಯಾದ ಅಥವಾ ಕಡಿಮೆಯಾದ ಪ್ರಮಾಣವನ್ನು ಆಧರಿಸಿ ಲೆಕ್ಕ ಹಾಕಲಾಗುತ್ತದೆ. ಗ್ರಾಹಕ ಬೆಲೆ ಸೂಚ್ಯಾಂಕ 7616 ಅಂಶಗಳಿಗಿಂತ ಹೆಚ್ಚಾಗುವ ಪ್ರತಿ ಅಂಶಕ್ಕೆ ಎಲ್ಲಾ ವರ್ಗದ ಕಾರ್ಮಿಕರಿಗೆ ದಿನ ಒಂದಕ್ಕೆ ನಾಲ್ಕು (4) ಪೈಸೆಯಂತೆ ತುಟ್ಟಿ ಭತ್ಯೆಯನ್ನು ಪಾವತಿಸತಕ್ಕದ್ದು.

ತುಟ್ಟಿಭತ್ಯೆಯನ್ನು ಲೆಕ್ಕಾಚಾರ ಮಾಡುವ ವಿಧಾನ:-

ಅ) ಮಾಸಿಕ ವೇತನವನ್ನು ಪಡೆಯುವವರು:-

ತಿಂಗಳ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಥವಾ ಕಡಿಮೆಯಾಗುವ ಗ್ರಾಹಕ ಬೆಲೆ

ಸೂಚ್ಯಾಂಕದ ಅಂಶಗಳು (ಸಿ.ಪಿ.ಐ) x ತುಟ್ಟಿಭತ್ಯೆಯ ದರ x 30 ದಿನಗಳು

ದಿನಗೂಲಿ ಗಳಿಕೆದಾರರ ಸಂದರ್ಭದಲ್ಲಿ ಮಾಸಿಕ ವೇತನ ದರಗಳನ್ನು ಇಪ್ಪತ್ತಾರು (26) ದಿನಗಳಿಂದ ವಿಭಾಗಿಸಿ, ನಾಲ್ಕು (4) ರಜಾ ದಿನಗಳಿಗೆ ವೇತನವನ್ನು ನೀಡುವುದೂ ಸೇರಿದಂತೆ ಈ ಕೆಳಕಂಡಂತೆ ಲೆಕ್ಕ ಹಾಕತಕ್ಕದ್ದು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

ಆ) ದಿನಗೂಲಿ ವೇತನ ಪಡೆಯುವವರು :-

ದಿನದ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಂಶಗಳು x ತುಟ್ಟಿಭತ್ಯೆಯ ದರ x 30 ದಿನಗಳು

26

2. ಮಹಿಳೆಯರು, ಪುರುಷರು ಮತ್ತು ತೃತೀಯ ಲಿಂಗಿಗಳು ಒಂದೇ ರೀತಿಯ ಕೆಲಸವನ್ನು ನಿರ್ವಹಿಸಿದ ಸಂದರ್ಭಗಳಲ್ಲಿ ಎಲ್ಲರಿಗೂ ಸಮಾನ ದರದ ವೇತನಗಳನ್ನು ಸಂದಾಯ ಮಾಡತಕ್ಕದ್ದು.

3. ಅಧಿಸೂಚನೆಯಲ್ಲಿ ವರ್ಗವನ್ನು ನಮೂದಿಸದೆ ಇರುವ ವರ್ಗಗಳ ಕಾರ್ಮಿಕರಿಗೆ ಅದೇ ಸ್ವರೂಪದ ಕೆಲಸ ನಿರ್ವಹಿಸುತ್ತಿರುವ ಇತರ ವರ್ಗದ ಕಾರ್ಮಿಕರಿಗೆ ಪಾವತಿ ಮಾಡುತ್ತಿರುವ ವೇತನವನ್ನು ಸಂದಾಯ ಮಾಡತಕ್ಕದ್ದು.

4. ತುಂಡು ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರ 8 ಗಂಟೆಗಳ ಕೆಲಸದ ವೇತನವು ಅದೇ ತರಹದ ಕೆಲಸ ಮಾಡುವ ಕಾರ್ಮಿಕರ ಒಂದು ದಿನದ ವೇತನಕ್ಕಿಂತ ಕಡಿಮೆ ಇರಕೂಡದು. ಒಂದು ದಿನದ ಕೆಲಸ ಎಂದರೆ 8 ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 8 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ ಅನುಗುಣವಾಗಿ ವೇತನವನ್ನು ಆ ವರ್ಗದ ದಿನದ ಅಥವಾ ತಿಂಗಳ ವೇತನದ ಆಧಾರದ ಮೇಲೆ ಲೆಕ್ಕ ಹಾಕುವುದು.

5. ದಿನಗೂಲಿ ನೌಕರರಿಗೆ ಅವರ ದಿನದ ವೇತನ ದರಗಳನ್ನು ಕಂಡು ಹಿಡಿಯಬೇಕಾದಲ್ಲಿ ತಿಂಗಳ ವೇತನ ದರವನ್ನು 26 ದಿನಗಳಿಂದ ಭಾಗಿಸಬೇಕು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

6. ಸಂಸ್ಥೆಯಲ್ಲಿ ನಿಗದಿಪಡಿಸಿರುವ ವಾರದ ರಜೆ ಅಥವಾ ಹಬ್ಬದ ರಜಾ ದಿನಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕನಿಷ್ಠ ವೇತನ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟು ಸಾಮಾನ್ಯ ವೇತನದ ಎರಡು ಪಟ್ಟು ವೇತನವನ್ನು ಪಾವತಿ ಮಾಡತಕ್ಕದ್ದು.

7. ಕೆಲಸಗಾರರು ದಿನದ ನಿಗದಿತ ಅವಧಿಗಿಂತ ಹೆಚ್ಚು ಸಮಯ ಕೆಲಸ ನಿರ್ವಹಿಸಿದಲ್ಲಿ ಅಂತಹ ಹೆಚ್ಚುವರಿ ಅವಧಿ ಕೆಲಸಕ್ಕೆ ಆತನ ವೇತನದ ಎರಡು ಪಟ್ಟು ವೇತನವನ್ನು ಪಾವತಿಸತಕ್ಕದ್ದು.

8. ವೇತನ ಲೆಕ್ಕಾಚಾರದಲ್ಲಿ ಚಿಲ್ಲರೆ ಬಂದ ಪಕ್ಷದಲ್ಲಿ ಅದನ್ನು ಸಮೀಪದ 50 ಪೈಸೆಗೆ ಪೂರ್ಣಗೊಳಿಸುವುದು.

9. ನೌಕರರುಗಳ ವೇತನವನ್ನು ಚೆಕ್ ಮೂಲಕ ಪಾವತಿಸುವುದು ಅಥವಾ ನೌಕರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡತಕ್ಕದ್ದು.

10. ಈ ಅಧಿಸೂಚನೆಯ ವಲಯಗಳನ್ನು ಈ ಕೆಳಕಂಡಂತೆ ವಿಂಗಡಿಸಲಾಗಿದೆ;

ವಲಯ-1 ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿ ಮತ್ತು ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು.
ವಲಯ-2 ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳು ಮತ್ತು ಇವುಗಳಿಗೆ ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು.
ವಲಯ-3 ವಲಯ-2 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು.
ವಲಯ-4 ವಲಯ-2 ಮತ್ತು 3 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಇತರೆ ಭಾಗಗಳು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

A. Umadevi 30/11/2022
(ಎ. ಉಮಾದೇವಿ)
ಪೀಠಾಧಿಕಾರಿ-2,
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಈ ಅಧಿಸೂಚನೆಯನ್ನು ಇ - ರಾಜ್ಯಪತ್ರದಲ್ಲಿ (E-Gazzette) ಪ್ರಕಟಿಸಲು ಕೋರಲಾಗಿದೆ.

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ).
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ).
4. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಇನ್ ಫೆಂಟ್ರಿ ರಸ್ತೆ, ಬೆಂಗಳೂರು
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಛೇರಿ, ಕಾರ್ಮಿಕ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)
7. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ.

ಪ್ರತಿಗಳು:

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ
3. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ